**ಪಿಡಬ್ಲ್ಯೂ-1**

**ಸಾಕ್ಷಿಯನ್ನು ದಿನಾಂಕಃ 18-07-2026 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಪಾಟಿ ಸವಾಲುಃ ವಾದಿ ಪರ ಶ್ರೀ ಎಸ್ ಎ ವಕೀಲರಿಂದ.**

1 ಮತ್ತು 2 ನೇ ಪ್ರತಿವಾದಿಯರು ಬೇರೆ-ಬೇರೆ ಮನೆಯಲ್ಲಿ ಪ್ರತ್ಯೇಕವಾಗಿರುತ್ತಾರೆ ಎಂದರೆ ಸರಿಯಲ್ಲ. ಇಬ್ಬರೂ ಒಂದೇ ಮನೆಯಲ್ಲಿ ಕೂಡಿ ಇರುತ್ತಾರೆ ಎಂದು ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. 5 ಎಕರೆ 20 ಗುಂಟೆ ಜಮೀನನ್ನು ನನ್ನ ತಂದೆ-ತಾಯಿಯವರು 1 ನೇ ಪ್ರತಿವಾದಿಗೆ ಕೊಟ್ಟಿರುತ್ತಾರೆ ಎಂದು ಈ ಮೊದಲು ನ್ಯಾಯಾಲಯದ ಮುಂದೆ ಹೇಳಿರುತ್ತೀಯಾ ಎಂದರೆ ಸರಿಯಲ್ಲ. 1 ಮತ್ತು 2 ನೇ ಪ್ರತಿವಾದಿಯವರು ಅವರವರ ಹೊಲದಲ್ಲಿ ಪ್ರತ್ಯೇಕವಾಗಿ ಮಾಡಿಕೊಳ್ಳುತ್ತಾರೆ ಅಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು ಅವರು ಕೂಡಿಯೇ ಸಾಗುವಳಿ ಮಾಡುತ್ತಾರೆ ಎಂದು ನುಡಿಯುತ್ತಾರೆ. ಹಾಗೆ ಇಬ್ಬರೂ ಕೂಡಿಯೇ ಸಾಗುವಳಿ ಮಾಡುತ್ತಾರೆ ಎಂದು ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ನಾನು ಯಾವುದೇ ದಾಖಲೆಯನ್ನು ಹಾಜರುಪಡಿಸದೇ ಇದ್ದರೂ ಹಾಜರುಪಡಿಸಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

2. ಮಾರಾಟ ಮಾಡಿದ ಕ್ಷೇತ್ರ 3 ಎಕರೆ ಜಮೀನನ್ನು ಹೊರತುಪಡಿಸಿ ಉಳಿದ ಜಮಿನಿಗೆ ಸಂಬಂದಿಸಿದಂತೆ ಈ ದಾವೆ ಮಾಡಿರುತ್ತೇನೆ. ನನಗೆ ಮದುವೆ ಸಮಯದಲ್ಲಿ ಕೊಡಬೇಕಾಗಿದ್ದನ್ನು ಕೊಟ್ಟಿದ್ದರೂ ಸಹಿತ, ಅದಕ್ಕೆ ಸಂಬಂದಿಸಿದಂತೆ 2013 ರಲ್ಲಿ ಮುಚ್ಚಳಿಕೆ ಪತ್ರ ಬರೆದುಕೊಟ್ಟಿದ್ದರೂ

ಸಹಿತ ಈಗ ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ಮತ್ತು ನಾಗಮ್ಮಳಿಗೆ ಬರಬೇಕಾದ ಪಾಲನ್ನು ತೆಗೆದುಕೊಂಡಿದ್ದರೂ ಸಹಿತ ಕಾಯ್ದೆಯ ತಿದ್ದುಪಡೆಯಿಂದ ಹೆಚ್ಚಿಗೆ ಆಸ್ತಿ ಬರುತ್ತದೆ ಎಂದು ಸುಳ್ಳು ದಾವೆಯನ್ನು ದಾಖಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಎಲ್ಲಾ ವಿಷಯಗಳನ್ನು ಮರೆಮಾಚಿ ಸುಳ್ಳು ದಾವೆ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಈಗಾಲೆ ಸದರಿ ಆಸ್ತಿಗೆ ಸಂಬಂದಿಸಿದಂತೆ 2-3 ಪ್ರಕರಣಗಳಿಗೆ ಸಂಬಂದಿಸಿದಂತೆ ನನ್ನ ವಾದ ಪತ್ರಗಳಲ್ಲಿ ಮತ್ತು ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಸದರಿ

ವಿಷಯ ಮುಚ್ಚಿಟ್ಟಿರುತ್ತೇನೆ ಎಂದರೆ ಸರಿಯಲ್ಲ. ನಾನು ಕೂಡು ಕುಟುಂಬದ ಸದಸ್ಯಳು ಇರುವುದಿಲ್ಲ, ನಾನು ಮದುವೆಯಾಗಿ ಗಂಡನ ಮನೆಯಲ್ಲಿದ್ದು, ನಾನು ಎಂದೂ ಪ್ರತಿವಾದಿಯರ ಜೊತೆ ಸೇರಿ ದಾವಾ ಜಮೀನಿನಲ್ಲಿ ಸಾಗುವಳಿ ಮಾಡುತ್ತಿದ್ದೆ ಎಂದರೆ ಸರಿಯಲ್ಲ. ಪ್ರತಿವಾದಿಯವರು 25-30 ವರ್ಷಗಳ ಹಿಂದೆ ಬೇರೆಯಾದ ಸಂಗತಿ ಗೊತ್ತಿದ್ದರೂ ಸಹಿತ ಪಾಲು ವಿಭಾಗ ಆಗಿಲ್ಲ ಎಂದು ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

ಓ. ಹೇ.ಕೇ. ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು,
ಶೋರಾಪುರ.